# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 33(39) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಖಾಲಿಯಿರುವ ಬೋಧಕ/ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು: (ಪ್ರತ್ಯೇಕ ವಿವರ ನೀಡುವುದು) | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯಾ ವಿವರ ಕೆಳಕಂಡಂತಿವೆ; |

**ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಹುದ್ದೆಗಳ ವಿವರ**

| ಹುದ್ದೆ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಾದ ಹುದ್ದೆಗಳ ಸಂಖ್ಯೆ |
|---|---|---|---|
| ಬೋಧಕ | 646 | 342 | 304 |
| ಬೋಧಕೇತರ | 1150 | 143 | 1007 |

**ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಹುದ್ದೆಗಳ ವಿವರ**

| ಹುದ್ದೆ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿಯಾದ ಹುದ್ದೆಗಳ ಸಂಖ್ಯೆ |
|---|---|---|---|
| ಬೋಧಕ | 2812 | 1857 | 955 |
| ಬೋಧಕೇತರ | 4642 | 942 | 3700 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು: (ಪ್ರತ್ಯೇಕ ವಿವರ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲಿ ಖಾಲಿ ಇರುವ ಬೋಧಕ /ಬೋಧಕೇತರ ಹುದ್ದೆಗಳ ವಿವರಗಳು ಕೆಳಕಂಡಂತಿದೆ. |

| ಹುದ್ದೆ | ಮಂಜೂರಾದ ಹುದ್ದೆ | ಭರ್ತಿಯಾಗಿರುವ ಹುದ್ದೆ | ಖಾಲಿಯಿರುವ ಹುದ್ದೆ |
|---|---|---|---|
| ಪ್ರಾಂಶುಪಾಲರು | 412 | 0 | 412 |
| ಬೋಧಕರು | 8350 | 6269 | 2081 |
| ಬೋಧಕೇತರರು | 5223 | 1675 | 3548 |

| | | |
|---|---|---|
| ಇ) | ದೀರ್ಘ ಕಾಲದಿಂದ ಸದರಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು;(ವಿವರ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆಗೆ ಮಂಜೂರಾದ ಒಟ್ಟು 412 ಪ್ರಾಂಶುಪಾಲರ ಹುದ್ದೆಗಳಲ್ಲಿ 310 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:11.06.2019ರಲ್ಲಿ ಅನುಮತಿ ನೀಡಲಾಗಿರುತ್ತದೆ.<br><br>ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ ಮಾನದಂಡ ಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದ್ದು, ಅದರಂತೆ, 310 ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:09.09.2020ರಲ್ಲಿ ಪ್ರಕಟಿಸಲಾಗಿದೆ.<br><br>ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, 310 ಪ್ರಾಂಶುಪಾಲರ ಹುದ್ದೆಗಳಿಗೆ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:21.03.2022 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ.<br><br>ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ **1242 ಸಹಾಯಕ ಪ್ರಾಧ್ಯಾಪಕರ** ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಸರ್ಕಾರದ ಪತ್ರ ಸಂಖ್ಯೆ:ಇಡಿ/185/ ಡಿಸಿಇ/2018, ದಿನಾಂಕ:03.08.2019ರಲ್ಲಿ ಅನುಮತಿ ನೀಡಲಾಗಿರುತ್ತದೆ.<br><br>ಸದರಿ **1242 ಸಹಾಯಕ ಪ್ರಾಧ್ಯಾಪಕರ** ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019(ಭಾ-3), ದಿನಾಂಕ:08.07.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ:19.10.2020 ರಲ್ಲಿ ಪ್ರಕಟಿಸಲಾಗಿದೆ. ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ದಿನಾಂಕ:26.08.2021ರ ಸಂಖ್ಯೆ:ಇಡಿ/257/ಡಿಸಿಇ/2019ರಲ್ಲಿ ಅಧಿಸೂಚನೆ ಹೊರಡಿಸಿದೆ. ಸದರಿ ಸರ್ಕಾರಿ ಅಧಿಸೂಚನೆಯನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:30.09.2021 ರಂದು ಈಗಾಗಲೇ ಅಧಿಸೂಚನೆ ಹೊರಡಿಸಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸಹ ನಡೆಸಿರುತ್ತದೆ. ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಹುದ್ದೆ ಭರ್ತಿಗೆ ಕ್ರಮವಹಿಸಲಾಗುವುದು.<br><br>ಬೋಧಕೇತರ ಖಾಲಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, 123 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಮತ್ತು 109 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಆಯೋಗವು ಸದರಿ ಹುದ್ದೆಗಳ ನೇಮಕಾತಿಗೆ ಅಧಿಸೂಚನೆಯನ್ನು ಹೊರಡಿಸಿದೆ.<br><br>**123 ಪ್ರಥಮ ದರ್ಜೆ ಸಹಾಯಕರ** ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗವು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅಂತಿಮ ಆಯ್ಕೆ ಪಟ್ಟಿಯನ್ನು ನೀಡಿದ್ದು, ಸದರಿ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆಗೆ ಕ್ರಮವಹಿಸಲಾಗಿದೆ. ಅದರಂತೆ ಅಗತ್ಯ ದಾಖಲಾತಿಗಳು ಸ್ವೀಕೃತಗೊಂಡ 88 ಅಭ್ಯರ್ಥಿಗಳಿಗೆ ಸ್ಥಳ ಆಯ್ಕೆ ಕೌನ್ಸಿಲಿಂಗ್ ಮೂಲಕ ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಿಗೆ ಸ್ಥಳ |

| | | |
|---|---|---|
| | | ನಿಯುಕ್ತಿ ಆದೇಶ ಹೊರಡಿಸಲಾಗಿದೆ. ಉಳಿದ ಅಭ್ಯರ್ಥಿಗಳ ದಾಖಲೆಗಳ ನೈಜತೆ ವರದಿ ಸ್ವೀಕೃತಗೊಂಡ ಕೂಡಲೇ ನೇಮಕಾತಿ ಆದೇಶ ನೀಡಲಾಗುವುದು.<br><br>**109 ದ್ವಿತೀಯ ದರ್ಜೆ ಸಹಾಯಕರ** ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗವು, ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅಂತಿಮ ಆಯ್ಕೆಪಟ್ಟಿಯನ್ನು ದಿನಾಂಕ:11.01.2023 ರಲ್ಲಿ ಅಧಿಸೂಚನೆ ಹೊರಡಿಸಿದ್ದು, ಸದರಿ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆಗೆ ಕ್ರಮವಹಿಸಲಾಗಿದೆ. ಪ್ರಕ್ರಿಯೆ ಪೂರ್ಣಗೊಂಡ ನಂತರ ಆದ್ಯತೆಯ ಮೇರೆಗೆ ಕಾಲೇಜುಗಳಿಗೆ ಹಂಚಿಕೆ ಮಾಡಲಾಗುವುದು.<br><br>ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ **ಬೆರಳಚ್ಚುಗಾರರ ಮತ್ತು ಪರಿಚಾರಕರ** ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಸರ್ಕಾರದಿಂದ ಈಗಾಗಲೇ ಅನುಮತಿ ನೀಡಿರುವ 347 ಗ್ರೂಪ್-ಡಿ ಹಾಗೂ 102 ಡಾಟಾ ಎಂಟ್ರಿ ಆಪರೇಟರ್ ಒಟ್ಟು 449 ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 117 ಯುಇಸಿ 2020(ಭಾಗ), ದಿನಾಂಕ:10.08.2022 ರಲ್ಲಿ ಇಲಾಖೆಯ ಕಛೇರಿಗಳು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅವಶ್ಯವಿರುವ ಗ್ರೂಪ್-ಡಿ ದರ್ಜೆಯ 700 ಕಛೇರಿ ಸಹಾಯಕರು ಮತ್ತು 300 ಶೈಕ್ಷಣಿಕ ಸಹಾಯಕರು (ಪ್ರಯೋಗಾಲಯಕ್ಕೆ) ಮತ್ತು ಸ್ವಚ್ಛತಾ ಕಾರ್ಯಕ್ಕೆ 152 ಒಟ್ಟು **1152** ಗ್ರೂಪ್-ಡಿ ನೌಕರರುಗಳನ್ನು ಇ-ಟೆಂಡರ್ ಆಹ್ವಾನಿಸಿ, ಸೇವೆ/ಹೊರ ಗುತ್ತಿಗೆ ಆಧಾರದ ಮೇಲೆ ಒದಗಿಸಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅದರಂತೆ, ಸದರಿ ಗ್ರೂಪ್-ಡಿ ನೌಕರರನ್ನು ಹೊರಗುತ್ತಿಗೆ ಆಧಾರದ ಒದಗಿಸಿಕೊಳ್ಳಲು ಕ್ರಮವಹಿಸಲಾಗುತ್ತಿದೆ.<br><br>**ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ** ರಾಜ್ಯ ಮಟ್ಟಕ್ಕೆ ಮೀಸಲಿಟ್ಟಿರುವ ಹುದ್ದೆಗಳು ಮತ್ತು ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಖಾಲಿ ಹುದ್ದೆಗಳನ್ನು ಒಳಗೊಂಡಂತೆ 501 ಉಪನ್ಯಾಸಕ ಹುದ್ದೆಗಳನ್ನು ತುಂಬಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ: ಪಿಎಸ್‌ಸಿ 01 ಆರ್‌ಟಿಬಿ-2-2016 ದಿ: 17-12.2016ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು, ಆದರೆ, ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ಎಐಸಿಟಿಇ ನಿಯಮಾವಳಿಗಳನ್ವಯ ವಿದ್ಯಾರ್ಹತೆಗೆ ತಿದ್ದುಪಡಿ ತರಬೇಕಾದ ಹಿನ್ನಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ:ಇಡಿ 196 ಡಿಟಿಇ 2016 ದಿನಾಂಕ:08.05.2017ರಲ್ಲಿ ನೇರ ನೇಮಕಾತಿ ಪ್ರಕ್ರಿಯೆಯನ್ನು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತಂದನಂತರ ಮುಂದುವರಿಸಲು ತಿಳಿಸಲಾಗಿದೆ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ತಿದ್ದುಪಡಿಯಾದ ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.<br><br>ವಿವಿದ ವೃಂದದ ಬೋಧಕೇತರ ಒಟ್ಟು 384 ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಆರ್ಥಿಕ ಮಿತವ್ಯಯ ಸಡಿಲಿಕೆ ನೀಡುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಏಕ ಕಡತ ಸಂಖ್ಯೆDTE-ADMI0EST(2)/22/2022ರಲ್ಲಿ ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. ಮುಂದುವರೆದು, ಗ್ರೂಪ್-ಡಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಇಡಿ 141 ಟಿಪಿಇ 2005, ದಿನಾಂಕ:16-05-2005 ರಲ್ಲಿ ಅಗತ್ಯ ಹುದ್ದೆಗಳಿಗೆ |

| | | |
|---|---|---|
| | | ಹೊರಗುತ್ತಿಗೆ ಮೂಲಕ ಸೇವೆ ಪಡೆದುಕೊಳ್ಳುವ ಅವಕಾಶವನ್ನು ಕಲ್ಪಿಸಲಾಗಿದ್ದು, ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಅವಕಾಶವಿರುವುದಿಲ್ಲ. |
| ಈ) | ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ 05 ವರ್ಷಕ್ಕಿಂತ ಹೆಚ್ಚಿಗೆ ನಿಯೋಜನೆ ಮೇಲಿರುವವರ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು: (ಪೂರ್ಣ ವಿವರ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳಿಂದ ಬೇರೆ ಇಲಾಖೆಯಲ್ಲಿ 05 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ನಿಯೋಜನೆ ಮೇರೆಗೆ ಯಾರೂ ಕರ್ತವ್ಯನಿರ್ವಹಿಸುತ್ತಿರುವುದಿಲ್ಲ. |
| ಉ) | ಬೋಧಕ ವರ್ಗದವರನ್ನು ಬೇರೆ ಇಲಾಖೆಗೆ ನಿಯೋಜನೆ ಮಾಡಬಾರದೆಂದು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಊ) | ಹಾಗಿದ್ದಲ್ಲಿ, ಈ ರೀತಿ ನಿಯೋಜನೆಯನ್ನು ಮುಂದುವರೆಸಲು ಕಾರಣಗಳೇನು: | |
| ಋ) | ಯಾವ ಕಾಲಮಿತಿಯಲ್ಲಿ ಅವರ ನಿಯೋಜನೆಯನ್ನು ರದ್ದುಪಡಿಸಲಾಗುವುದು? | ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಪ್ರಶ್ನೆ ಉದ್ಭವಿಸುವುದಿಲ್ಲ |

**ಇಡಿ 43 ಟಿಇಸಿ 2023**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು